**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 2078/2022**

**ಚಾ.ಸಾ.** 14

**ಪ್ರಾ.ಸಾ.** 6

**ದಿನಾಂಕಃ 18.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಹಾಲಪ್ಪ ಶೇಖರಪ್ಪ ಗೆನ್ನೇರ |
| ತಂದೆಃ ಗಂಡನ ಹೆಸರು | ಶೇಖರಪ್ಪ |
| ಉದ್ಯೋಗ | ಎ ಎಸ್ ಐ ಕುಂದಗೋಳ ಪೊಲೀಸ್ ಠಾಣೆ |
| ವಯಸ್ಸು | 59 ವರ್ಷ |
| ವಾಸಸ್ಥಳ | ಕುಂದಗೋಳ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ದಿನಾಂಕಃ 18.06.2022 ರಂದು ಕಲಘಟಗಿ ಠಾಣಾ ಎಸ್ ಎಚ್ ಓ ಕರ್ತವ್ಯದಲ್ಲಿ ಇದ್ದಾಗ ಮದ್ಯಾಹ್ನ 12.15 ಸುಮಾರಿಗೆ ಚಾಸಾ-1 ರವರು ಠಾಣೆಗೆ ಬಂದು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ನಮ್ಮ ಠಾಣೆ ಗುನ್ನಾ ನಂ.134/22 ರಲ್ಲಿ ಕಲಂ 279,304 ಎ ಐಪಿಸಿ ನೇದ್ದರಲ್ಲಿ ಪ್ರಕರಣ ದಾಖಲಿಸಿಕೊಂಡು ಮೂಲ ಫಿರ್ಯಾದಿ ಹಾಗೂ ಪ್ರಥಮ ವರ್ತಮಾನ ವರದಿಯನ್ನು ಪಿಸಿ 799 ಮುಖಾಂತರ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಮುಂದಿನ ತನಿಖೆಯನ್ನು ಚಾಸಾ-15 ರವರಿಗೆ ಈ ಪ್ರಕರಣದ ಕಡತವನ್ನು ಹಸ್ತಾಂತರಿಸಿದೆ.

ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-14 ಎಂದು ಅದರ ಮೇಲೆ ಇರುವ ಸಾಕ್ಷಿಯ ಗುರುತನ್ನು ನಿಪಿ-14 ಎ ಎಂದು ಗುರುತಿಸಲಾಯಿತು.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಗಿದೆ ಅದರ ಮೇಲೆ ಇರುವ ಸಾಕ್ಷಿಯ ಹಿಂಬರಹ ಮತ್ತು ಸಹಿಯನ್ನು ನಿಪಿ-6 ಬಿ ಮತ್ತು 6-ಸಿ ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಎಸ್ ಆರ್ ಎಚ್ ವಕೀಲರಿಂದ**

ಪಿರ್ಯಾದಿದಾರರಿಗೆ ವಿಮಾ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ಪಿರ್ಯಾದಿಯನ್ನು ಪಡೆದುಕೊಂಡು ಸುಳ್ಳು ಪ್ರಕರಣವನ್ನು ದಾಖಲಿಸುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣ ಆರೋಪಿಯು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಇಂದು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ರೀತಿ ಸಂಬಂಧಇಲ್ಲ ಎಂದರೆ ಸರಿಯಲ್ಲ. ಠಾಣೆಯ ಅಂಕೆ ಸಂಖ್ಯೆಯ ಸಲುವಾಗಿ ಈ ಪ್ರಕರಣವನ್ನು ದಾಖಲಿಸುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು-ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**